ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಸ್ಟೆಲ್‌ಗಳ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

211 (221) ಮಾನ್ಯ ಉಪ ಮುಖ್ಯಮಂತ್ರಿಗಳು (ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು) ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರು, ಮಲಗಲು ಮಂಚ, ಹಾಸಿಗೆ ದಿಂಬು ಮತ್ತು ಹೊದಿಕೆಗಳು ಸಾಕಷ್ಟು ಪ್ರಮಾಣದಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕೊರತೆಯನ್ನು ನೀಗಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ರಾಜ್ಯದಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಹಲವಾರು ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಸರಿಯಾದ ಸಮಯದಲ್ಲಿ, ಸರಿಯಾದ ಪ್ರಮಾಣದಲ್ಲಿ ಮುಂಜಾನೆಯ ಉಪಹಾರ, ಮಧ್ಯಾಹ್ನದ ಊಟ ಮತ್ತು ರಾತ್ರಿಯ ಊಟಗಳು ದೊರೆಯುದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ವಿದ್ಯಾರ್ಥಿಗಳಿಗೆ ಸರಿಯಾದ ಸಮಯಕ್ಕೆ ಪೋಷಕಾಂಶಯುಕ್ತ ಗುಣಮಟ್ಟದ ಆಹಾರ ದೊರೆಯುವಂತಾಗಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಈ ಹಾಸ್ಟೆಲ್‌ಗಳಲ್ಲಿ ಸೋಲಾರ್ ವ್ಯವಸ್ಥೆಯನ್ನು ಅಳವಡಿಸಲಾಗಿದೆಯೇ; ಇಲ್ಲವಾದಲ್ಲಿ, ಅಳವಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?